ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಇಲ್ಲ.

ಆ) **ಮತ್ತು** ಇ) ಪ್ರಸ್ತುತ ಬಿಜಾಪುರದಲ್ಲಿರುವ ವಿಭಾಗೀಯ ಕಛೇರಿ ಆಡಳಿತ ವ್ಯಾಪ್ತಿಗೆ ಬರುವ ಮುದ್ದೇಬಿಹಾಳ ಘಟಕವು ಸೇರಿದಂತೆ, ಉಳಿದ ಎಲ್ಲ ಘಟಕಗಳಿಗೆ ಬಿಜಾಪೂರ ಕೇಂದ್ರ ಸ್ಥಾನವಾಗಿರುತ್ತದೆ. ಇದರಿಂದ ಎಲ್ಲ ಘಟಕಗಳ ಆಡಳಿತ ವ್ಯವಸ್ಥೆ ನೋಡಿಕೊಳ್ಳಲು ಮತ್ತು ಸಾರ್ವಜನಿಕರಿಗೆ ಹಾಲಿ ಬಿಜಾಪುರ ವಿಭಾಗೀಯ ಕಛೇರಿ ಅತ್ಯಂತ ಸೂಕ್ತವಾಗಿರುವುದೆ.

ಪ್ರಸ್ತುತ ಬಿಜಾಪುರ ವಿಭಾಗದ ಆಡಳಿತ ವ್ಯಾಪ್ತಿಯಲ್ಲಿ 7 ಬಸ್ ಘಟಕಗಳು ಬರುತ್ತಿದ್ದು, ಸದರಿ ವಿಭಾಗವನ್ನು ವಿಂಗಡಿಸಿ ಮುದ್ದೇಬಿಹಾಳ ಪಟ್ಟಣದಲ್ಲಿ ನೂತನ ವಿಭಾಗೀಯ ಕಛೇರಿ ಪ್ರಾರಂಭಿಸುವ ಪ್ರಸ್ತಾವನೆ ಲಾಭದಾಯಕವಾಗಿರುವುದಿಲ್ಲ

ಪ್ರಾಥಮಿಕ ಆರೋಗ್ಯ ಕೇಂದ್ರಗಳು

451(909); ಶ್ರೀ ಅಶೋಕ ಖೇಣಿ (ಬೀದರ ದಕ್ಷಿಣ)

ಅ) ಬೀದರ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ;

ಆ) ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಇ) ಇತ್ತೀಚೆಗೆ ಬೀದರ ದಕ್ಷಿಣ ಕ್ಷೇತ್ರದಲ್ಲಿ ಕಾಲರಾದಿಂದ ಸತ್ತಪಟ್ಟ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು?

ಶ್ರೀ ಯು ಟಿ ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬೀದರ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ

ಆ) ಸರ್ಕಾರದ ಆದೇಶ ಸಂಖ್ಯೆ: ಆಕುಕ/350/ಸಿಜೆಎಂ/2010, ದಿನಾಂಕ·11–01–2011ರಲ್ಲಿ ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಗಳ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ತಕ್ಷಣದಿಂದ ಜಾರಿಗೆ ಬರುವಂತೆ 3 ವರ್ಷಗಳ ಅವಧಿಗೆ ಸರ್ಕಾರವು ತಡೆಹಿಡಿದಿದೆ

ಇ) ಬೀದರ ದಕ್ಷಿಣ ಕ್ಷೇತ್ರದಲ್ಲಿ ಕಾಲರಾ ಪ್ರಕರಣದಿಂದ ಯಾರು ಮೃತಪಟ್ಟರುವುದಿಲ್ಲ

ಈ) ಉದ್ಭವಿಸುವುದಿಲ್ಲ.

ಅನುದಾನ ಬಿಡುಗಡೆ

452(910); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

ಅ) 2013–14ನೇ ಸಾಲಿನಲ್ಲಿ ಬೀದರ ದಕ್ಷಿಣ ವಿಧಾನ ಸಭಾ ಕ್ಷೇತ್ರಕ್ಕೆ ವಿವಿಧ ಯೋಜನೆಗೆ ಬಿಡುಗಡೆಯಾದ ಅನುದಾನದ, (ವಿವರ ಒದಗಿಸುವುದು)

ಆ) ಬೀದರ ದಕ್ಷಿಣ ಕ್ಷೇತ್ರ ಪರಿಶಿಷ್ಟ ಪಂಗಡದ ವಿದ್ಯಾರ್ಥಿ ವಸತಿನಿಲಯ ಕಾಮಗಾರಿ ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಇ) ಬೀದರ ದಕ್ಷಿಣ ಕ್ಷೇತ್ರವು ಬಹಳ ಹಿಂದುಳಿದ ಕ್ಷೇತ್ರವಾಗಿರುವುದರಿಂದ ಹೊಸ ಯೋಜನೆಗಳನ್ನು ಅನುಷ್ಠಾನಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ,

ಈ) ಹಾಗಿದ್ದಲ್ಲಿ 2013–14ನೇ ಸಾಲಿನಲ್ಲಿ ಯಾವ ಯೋಜನೆಗಳನ್ನು ಕೈಗೊಳ್ಳಲಾಗುವುದು?